# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆಗುರುತಿಲ್ಲದ ಪ್ರಶ್ನೆ ಸಂಖ್ಯೆ : 65

ಸದಸ್ಯರ ಹೆಸರು : ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರಿಸಬೇಕಾದ ಸಚಿವರು : ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು

ಉತ್ತರಿಸಬೇಕಾದ ದಿನಾಂಕ : 29-01-2021

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಲಾಕ್‌ಡೌನ್ ಸಂದರ್ಭದಲ್ಲಿ ಟ್ಯಾಕ್ಸಿ ಮತ್ತು ಆಟೋ ಚಾಲಕರಿಗೆ ಘೋಷಿಸಲಾದ ಪ್ಯಾಕೇಜ್ ಫಲಾನುಭವಿಗಳಿಗೆ ತಲುಪಿದೆಯೆ? | ಸೇವಾ ಸಿಂಧು ವೆಬ್ ಪೋರ್ಟಲ್‌ನಲ್ಲಿ ಆಟೋರಿಕ್ಷಾ ಮತ್ತು ಟ್ಯಾಕ್ಸಿ ಚಾಲಕರು ಪರಿಹಾರ ಧನ ಕೋರಿ ಸಲ್ಲಿಸಿರುವ ಅರ್ಹ ಫಲಾನುಭವಿಗಳ ಖಾತೆಗಳಿಗೆ ಪರಿಹಾರ ಧನವನ್ನು ಜಮೆ ಮಾಡಲಾಗಿರುತ್ತದೆ. |
| ಆ) | ಎಷ್ಟು ಫಲಾನುಭವಿಗಳಿಗೆ ತಲುಪಿದೆ? ಒಟ್ಟು ಮೊತ್ತವೆಷ್ಟು? (ವಿವರ ನೀಡುವುದು) | ಸೇವಾ ಸಿಂಧು ವೆಬ್ ಪೋರ್ಟಲ್‌ನಲ್ಲಿ ದಿನಾಂಕ: 31-07-2020ರ ಅಂತ್ಯಕ್ಕೆ ಆಟೋರಿಕ್ಷಾ ಮತ್ತು ಟ್ಯಾಕ್ಸಿ ಚಾಲಕರು ಪರಿಹಾರ ಧನ ಕೋರಿ ಒಟ್ಟು 2,45,852 ಅರ್ಜಿಗಳು ಸ್ವೀಕೃತವಾಗಿರುತ್ತವೆ ಹಾಗೂ ಸಾರಿಗೆ ಇಲಾಖೆಗೆ ಸರ್ಕಾರದಿಂದ ಪರಿಹಾರ ಧನ ವಿತರಿಸುವ ಸಂಬಂಧ **ರೂ.117.51** ಕೋಟಿ ಅನುದಾನವನ್ನು ಬಿಡುಗಡೆಗೊಳಿಸಲಾಗಿರುತ್ತದೆ. ಸದರಿ ಅನುದಾನದಲ್ಲಿ **ರೂ.108.15** ಕೋಟಿಗಳನ್ನು ಉಪಯೋಗಿಸಿಕೊಂಡು ಇಲ್ಲಿಯವರೆಗೆ **2,15,612** ಫಲಾನುಭವಿಗಳಿಗೆ ಪರಿಹಾರ ಧನವನ್ನು ವಿತರಿಸಲಾಗಿರುತ್ತದೆ. |
| ಇ) | ಸರ್ಕಾರ ಸೂಚಿಸಿದ ದಾಖಲೆ ಪತ್ರಗಳು ಕೆಲವು ಟ್ಯಾಕ್ಸಿ ಮತ್ತು ಆಟೋ ಚಾಲಕರ ಬಳಿ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? | ಕರ್ನಾಟಕ ಸರ್ಕಾರದ ಆದೇಶ ಸಂಖ್ಯೆ: ಟಿಡಿ 121 ಟಿಡಿಜ 2020, ದಿನಾಂಕ: 16-05-2020 ಹಾಗೂ ಮಾರ್ಪಾಡು ಆದೇಶ ದಿನಾಂಕ:29-05-2020ರಲ್ಲಿ ಆಟೋರಿಕ್ಷಾ ಮತ್ತು ಟ್ಯಾಕ್ಸಿ ಚಾಲಕರಿಗೆ ಮಾತ್ರ ಒಮ್ಮೆ ಪರಿಹಾರವಾಗಿ ರೂ.5,000/-ಗಳ ಪರಿಹಾರ ಧನವನ್ನು ಷರತ್ತುಗಳಿಗೊಳಪಟ್ಟು ನೀಡಲು ಮಂಜೂರಾತಿ ನೀಡಿ ಆದೇಶಿಸಲಾಗಿದೆ. |
| ಈ) | ಬಂದಿದ್ದರೆ, ಅಂತಹ ಚಾಲಕರುಗಳಿಗೆ ಯಾವ ರೀತಿ ಪರಿಹಾರ ನೀಡಲಾಗಿದೆ? (ಸಂಪೂರ್ಣ ಮಾಹಿತಿ ನೀಡುವುದು) | ಸದರಿ ಆದೇಶದಲ್ಲಿ ಅರ್ಹ ಟ್ಯಾಕ್ಸಿ ಮತ್ತು ಆಟೋ ಚಾಲಕರನ್ನು ಗುರುತಿಸಿ DBT ಮುಖಾಂತರ ಪರಿಹಾರ ವಿತರಿಸಲು ಅಗತ್ಯವಿರುವ ಕನಿಷ್ಠ ದಾಖಲೆಗಳನ್ನು ನಿಗದಿಪಡಿಸಲಾಗಿರುತ್ತದೆ.<br>ಚಾಲನಾ ಅನುಜ್ಞಾ ಪತ್ರ ಮತ್ತು ಆಧಾರ್ ಕಾರ್ಡಿನ ವಿವರಗಳಲ್ಲಿ ಹೊಂದಾಣಿಕೆಯಿಲ್ಲದ ಕಾರಣ 2507 ಅರ್ಜಿಗಳು ತಿರಸ್ಕೃತವಾಗಿರುತ್ತವೆ.<br>ID validation failed ತಾಂತ್ರಿಕ ಸಮಸ್ಯೆಯಿಂದ / ಫಲಾನುಭವಿಗಳ ಬ್ಯಾಂಕ್ ಖಾತೆಗಳು Inactive ಆಗಿರುವ ಕಾರಣ / ಬ್ಯಾಂಕ್ ಖಾತೆಗಳಿಗೆ ಆಧಾರ್ ಸಂಖ್ಯೆ ಜೋಡಣೆ ಆಗದಿರುವ ಕಾರಣ ನಿಯಮಾವಳಿಯಂತೆ ಪರಿಹಾರ ಧನವನ್ನು ಕೋರಿ ಅರ್ಜಿ ಸಲ್ಲಿಸಿದವರಿಗೆ ಡಿ.ಬಿ.ಟಿ. ಮುಖಾಂತರ ನೇರವಾಗಿ ಜಮೆ ಮಾಡಲು ಸಾಧ್ಯವಾಗಿರುವುದಿಲ್ಲ. ಈ ಸಂಬಂಧ ಹೆಚ್ಚುವರಿ ಬ್ಯಾಂಕ್ ಖಾತೆ ಮಾಹಿತಿಯನ್ನು ದಿನಾಂಕ:25-11-2020 ರೊಳಗಾಗಿ ಸೇವಾಸಿಂಧು ವೆಬ್ ಪೋರ್ಟಲ್‌ನಲ್ಲಿ ದಾಖಲಿಸಲು ಬಾಕಿ ಅರ್ಹ ಫಲಾನುಭವಿಗಳ ಮೊಬೈಲ್ ಸಂಖ್ಯೆಗೆ ಎಸ್.ಎಂ.ಎಸ್. ಮುಖಾಂತರ ಮಾಹಿತಿಯನ್ನು ನೀಡಲಾಗಿರುತ್ತದೆ. ಅದಕ್ಕನುಗುಣವಾಗಿ ಸ್ವೀಕೃತವಾಗಿರುವ ಮಾಹಿತಿಯನ್ನು ಪರಿಶೀಲಿಸಿ ಪರಿಹಾರ ಧನ ವಿತರಿಸುವ ಕ್ರಮ ಚಾಲ್ತಿಯಲ್ಲಿರುತ್ತದೆ. |

ಟಿಡಿ 02 ಟಿಡಿಕ್ಯೂ 2021

(ಲಕ್ಷ್ಮಣ ಸಂಗಪ್ಪ ಸವದಿ)
ಉಪ ಮುಖ್ಯಮಂತ್ರಿಗಳು ಹಾಗೂ
ಸಾರಿಗೆ ಸಚಿವರು